# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 582
ಸದಸ್ಯರ ಹೆಸರು : ಶ್ರೀ. ಎಚ್ ಎಸ್ ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 11/03/2025
ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ | ಹಟ್ಟಿ ಪಟ್ಟಣ ಪಂಚಾಯಿತಿಯನ್ನು ಮೇಲ್ದರ್ಜೆಗೇರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ಅಲ್ಲಿನ ಜನರು ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; | ರಾಯಚೂರು ಜಿಲ್ಲೆಯ ಹಟ್ಟಿ ಪಟ್ಟಣ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಅಥವಾ ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಜಿಲ್ಲಾಧಿಕಾರಿ, ರಾಯಚೂರು ಜಿಲ್ಲೆ ರವರಿಂದ ಸಲ್ಲಿಸಲಾಗುವ ದಾಖಲೆಗಳನ್ವಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ನಿಯಮಾನುಸಾರ ಅರ್ಹವಾದ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದಲ್ಲಿ ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರಲ್ಲಿನ ಮಾನದಂಡಗಳನ್ವಯ ಆಡಳಿತಾತ್ಮಕ ಹಿತದೃಷ್ಟಿಯಿಂದ ನಿಯಮಾನುಸಾರ ಪರಿಶೀಲಿಸಲಾಗುತ್ತದೆ.<br><br>ಹಟ್ಟಿ ಪಟ್ಟಣ ಪಂಚಾಯಿತಿಗೆ ಎಸ್‌ಎಫ್‌ಸಿ ಅನುದಾನ, 15ನೇ ಹಣಕಾಸು ಆಯೋಗದ ಅನುದಾನ, ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಹಂತ–4 ರ ಯೋಜನೆ ಮತ್ತು ಸ್ವಚ್ಛ ಭಾರತ್ ಅಭಿಯಾನ ಯೋಜನೆಗಳಡಿಯಲ್ಲಿ ಪ್ರಗತಿಪರ ದೃಷ್ಟಿಯಿಂದ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಜೊತೆಗೆ ಸಾಕಷ್ಟು ಅಧಿಕಾರಿ/ಸಿಬ್ಬಂದಿಯು ಹಟ್ಟಿ ಪಟ್ಟಣ ಪಂಚಾಯಿತಿಯಲ್ಲಿ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದ್ದು, ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿರುತ್ತದೆ. |
| ಆ | ಸದರಿ ಪಂಚಾಯಿತಿಯನ್ನು ಪುರಸಭೆಯಾಗಿ ಅಥವಾ ನಗರಸಭೆಯಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ಇದನ್ನು ಮೇಲ್ದರ್ಜೆಗೇರಿಸಲು ಸರ್ಕಾರವು ಚಿಂತಿಸುವುದು (ವಿವರ ನೀಡುವುದು)? | |

ಸಂಖ್ಯೆ:ನಅಇ 09 ಎಲ್‌ಸಿಕ್ಯೂ 2025.

(ರಹೀಂ ಖಾನ್)
ಪೌರಾಡಳಿತ ಹಾಗೂ ಹಜ್ ಸಚಿವರು